# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,


**ಎಡಿಆರ್ ಕಟ್ಟಡ ಸಿವಿಲ್ ನ್ಯಾಯಾಲಯಗಳ ಆವರಣ, ಧಾರವಾಡ**

ದೂರವಾಣಿ ಸಂಖ್ಯೆ:0836-2740128 ಇ-ಮೇಲ್:**dlsa.dwd2@gmail.com** ಟೋಲ್ ಫ್ರೀ ನಂ.1800-425-90900


## ಮಾಹಿತಿ ಹಕ್ಕು ಅಧಿನಿಯಮ, 2005 ರ ಪ್ರಕರಣ 4 ರಡಿಯಲ್ಲಿ ಮಾಹಿತಿ ವಿವರ

***ಕಾನೂನು ಸೇವೆಗಳ ಪ್ರಾಧಿಕಾರದ ಧ್ಯೇಯೋದ್ದೇಶಗಳು:***

- ಸಾರ್ವಜನಿಕರಲ್ಲಿ ಕಾನೂನಿನ ಬಗ್ಗೆ ಅರಿವನ್ನು ಉಂಟುಮಾಡುವುದು.
- ಉಚಿತ ಕಾನೂನು ನೆರವು ಮತ್ತು ಸಲಹೆಯನ್ನು ಕೊಡುವುದು.
- ಜನತಾ ನ್ಯಾಯಾಲಯಗಳ (ಲೋಕ ಅದಾಲತ್) ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಜನರಿಗೆ ತ್ವರಿತವಾಗಿ ನ್ಯಾಯ ದೊರಕಿಸಿಕೊಡುವುದು.

***ಕಾನೂನು ಸೇವೆಗಳ ಪ್ರಾಧಿಕಾರದಿಂದ ಉಚಿತವಾಗಿ ದೊರಕುವ ಸೇವೆಗಳು:***

- ಉಚಿತ ಕಾನೂನು ಸೇವೆಗಳ (ನಿಶ್ಚಿತ ವರ್ಗಗಳವರಿಗೆ) ಹಾಗೂ ವಾರ್ಷಿಕ ಆದಾಯ ರೂ.3,00,000/- ಲಕ್ಷಗಳಿಗಿಂತ ಕಡಿಮೆ ಹೊಂದಿರುವವರಿಗೆ.
- ಉಚಿತ ಕಾನೂನು ಸೇವೆ ಮತ್ತು ಸಲಹೆಯನ್ನು ಕೊಡುವುದು.
- ರಾಜೀ ಸಂದಾನ ಮಾಡುವುದು.
- ಜನತಾ ನ್ಯಾಯಾಲಯಗಳ ಮೂಲಕ ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಇತ್ಯರ್ಥಪಡಿಸುವುದು.
- ಮಧ್ಯಸ್ಥಿಕೆ ಕೇಂದ್ರಗಳ ಮೂಲಕ ಸಂದಾನ ವ್ಯವಸ್ಥೆ.
- ಪರ್ಯಾಯ ವ್ಯಾಜ್ಯ ಪರಿಹಾರದ ವ್ಯವಸ್ಥೆ.
- ವ್ಯಾಜ್ಯ ಪೂರ್ವ ಸಮಸ್ಯಗಳ ಪರಿಹಾರ.
- ಕಾನೂನು ಸಾಕ್ಷರತೆ/ಕಾನೂನು ಅರಿವು-ನೆರವು
- ಖಾಯಂ ಜನತಾ ನ್ಯಾಯಾಲಯ (Permanent Lok Adalat) ಗಳ ಮುಖಾಂತರ ಕೆಲವು ಸಾರ್ವಜನಿಕ ಉಪಯುಕ್ತ ಸೇವೆಗಳ ವಿವಾದಗಳ ಇತ್ಯರ್ಥ

***-:ಉಚಿತ ಕಾನೂನು ಸಲಹೆ ಮತ್ತು ನೆರವನ್ನು ಯಾರಿಗೆ ಕೊಡುಬಹುದು:-***

- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರು.
- ಮಹಿಳೆಯರು ಮತ್ತು ಮಕ್ಕಳು.
- ಕಾರ್ಖಾನೆಯ ಕಾರ್ಮಿಕರು.
- ಗುಂಪು ಘರ್ಷಣೆ, ಗಲಭೆ, ಪ್ರವಾಹ, ಕ್ಷಾಮ, ಭೂಕಂಪ ಕೈಗಾರಿಕಾ ವಿನಾಶ ಮುಂತಾದವುಗಳಿಗೆ ತುತ್ತಾದವರು.
- ಮತೀಯ ಗಲಭೆ ಕಾರಣದಿಂದ ದೌರ್ಜನ್ಯಕ್ಕೆ ಹೊಂದಿದವರು.
- ಮಾನಸಿಕ ಅಥವಾ ಬೇರೆ ಯಾವುದೇ ನ್ಯೂನ್ಯತೆ ಹೊಂದಿರುವವರು.
- ರಕ್ಷಣಾ ಗೃಹ, ಮನೋರೋಗಿಗಳ ಆಸ್ಪತ್ರೆ ಮುಂತಾದವುಗಳಲ್ಲಿ ಅಭಿರಕ್ಷೆಯಲ್ಲಿರುವವರು
- ದೈಹಿಕ ವ್ಯಾಪಾರ ಅಥವಾ ಜೀತಕ್ಕೊಳಗಾದವರು.
- ವಾರ್ಷಿಕ ಆದಾಯ ಮೂರು ಲಕ್ಷ ರೂಪಾಯಿಗಳಿಗಿಂತ ಕಡಿಮೆ ಇರುವ ಎಲ್ಲಾ ವರ್ಗದ ಜನರು ಉಚಿತ ಕಾನೂನು ನೆರವು ಪಡೆಯಲು ಅರ್ಹರಿರುತ್ತಾರೆ.

- ❖ ಸರ್ವೋಚ್ಚ ನ್ಯಾಯಾಲಯದಲ್ಲಿ (ಸುಪ್ರೀಂ ಕೋರ್ಟ್) ಕಾನೂನು ಸೇವೆಯನ್ನು ಪಡೆಯಲು ವಾರ್ಷಿಕ ಆದಾಯ ಐದು ಲಕ್ಷಕ್ಕಿಂತ ಕಡಿಮೆ (5 Lakhs)ಇರುವ ಎಲ್ಲಾ ವರ್ಗದ ಜನರು ಉಚಿತ ಕಾನೂನು ಸೇವೆಯನ್ನು ಪಡೆಯಲು ಅರ್ಹರಿರುತ್ತಾರೆ.
- ❖ ಉಚಿತ ಕಾನೂನು ನೆರವು ಎಂದರೆ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ವಕೀಲರ ಫೀಸು ಮತ್ತು ನ್ಯಾಯಾಲಯ ಶುಲ್ಕ ಹಾಗೂ ಇತರೆ ವೆಚ್ಚಗಳನ್ನು ಸಂಪೂರ್ಣವಾಗಿ ಜಿಲ್ಲಾ ಪ್ರಾಧಿಕಾರದಿಂದಲೇ ಭರಿಸಲಾಗುವುದು.
- ❖ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದವರು ಕಾನೂನು ಸೇವೆಗಳ ಹಾಗೂ ರಾಜ್ಯ ಪ್ರಾಧಿಕಾರದ ಮಾರ್ಗದರ್ಶನದಂತೆ ಜಿಲ್ಲಾ ಕೇಂದ್ರದಲ್ಲಿರುವ ಬಾಲ ನ್ಯಾಯ ಮಂಡಳಿಯ ರಕ್ಷೆಯಲ್ಲಿರುವ ಮಕ್ಕಳು ಉಚಿತ ಕಾನೂನು ಸೇವೆಯನ್ನು ಪಡೆಯಬಹುದಾಗಿರುತ್ತದೆ. ಈ ನ್ಯಾಯ ಮಂಡಳಿಯಲ್ಲಿರುವ ಮಕ್ಕಳ ಸಮಸ್ಯೆಗಳ ಬಗ್ಗೆ ನುರಿತ ವಕೀಲರಿಂದ ಸಮಸ್ಯೆಗಳನ್ನು ಪರಿಹರಿಸುವ ಕ್ರಮ, ಮಕ್ಕಳ ಸಂರಕ್ಷಣೆ ಇತರೆ ವ್ಯವಸ್ಥೆಯನ್ನು ಜಿಲ್ಲಾ ಪ್ರಾಧಿಕಾರದ ಮೂಲಕ ವ್ಯವಸ್ಥೆ ಮಾಡಲಾಗುವುದು.
- ❖ ವಿಚಾರಣಾಧೀನ ಖೈದಿಗಳಿಗೆ ಉಚಿತ ಕಾನೂನು ಸೇವೆಗಳನ್ನು ನೀಡಲಾಗುವುದು.

**ಕರ್ನಾಟಕ ಸಂತ್ರಸ್ಥರ ಪರಿಹಾರ ಯೋಜನೆ:–**

- ❖ ಕರ್ನಾಟಕ ಸಂತ್ರಸ್ತರ ಪರಿಹಾರ ಯೋಜನೆ, 2011 (Karnataka Victim Compensation Scheme, 2011) ರಡಿಯಲ್ಲಿ ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ (Cr.P.C) ಕಲಂ 357 ಎ ಅಡಿಯಲ್ಲಿ ಅಪರಾಧದಿಂದ ವೈಯಕ್ತಿಕ ಮತ್ತು ಆಸ್ತಿಗೆ ಸಂಬಂಧಪಟ್ಟಂತೆ ನಷ್ಟ ಮತ್ತು ಹಾನಿಯನ್ನು ಅನುಭವಿಸಿದ ಸಂತ್ರಸ್ತರು ಮತ್ತು ಅವರ ಅವಲಂಬಿತರಿಗೆತರಿಗೆ ಪರಿಹಾರ ಮತ್ತು ಪುನರವಸತಿ ಒದಗಿಸುವ ಸಲುವಾಗಿ “ಸಂತ್ರಸ್ತರ ಪರಿಹಾರ ಯೋಜನೆ” ಕರ್ನಾಟಕ ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂಖ್ಯೆ: HD 1 PCB 2011 ಬೆಂಗಳೂರು ದಿನಾಂಕ:22–02–2012 ರನ್ವಯ ಅಪರಾಧದಿಂದ ನಷ್ಟ ಮತ್ತು ಹಾನಿಯನ್ನು ಅನುಭವಿಸಿದ ಸಂತ್ರಸ್ಥರು ಮತ್ತು ಅವರ ಅವಲಂಬಿತರು ಪರಿಹಾರ ಧನವನ್ನು ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಅರ್ಜಿಯನ್ನು ಸಲ್ಲಿಸಿ ಪರಿಹಾರ ಪಡೆಯಬಹುದಾಗಿದೆ.
- ❖ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ವಿಶೇಷ ಯೋಜನೆಯಡಿಯಲ್ಲಿರುವ ಅಸಂಘಟಿಡ ವಲಯದ ಕಾರ್ಮಿಕರಿಗೆ ಅಂದರೆ ಕಟ್ಟಡ ನಿರ್ಮಾಣ ಕಾರ್ಮಿಕರು, ಬೀಡಿ ಕಾರ್ಮಿಕರು ಹಾಗೂ ಇತರೆ ಅಸಂಘಟಿತ ವಲಯದ ಕೂಲಿ ಕಾರ್ಮಿಕರು ಉಚಿತ ಕಾನೂನು ಸೇವೆಯನ್ನು ರಾಜ್ಯ ಪ್ರಾಧಿಕಾರದ/ಜಿಲ್ಲಾ ಪ್ರಾಧಿಕಾರ, ಮೂಲಕ ಪಡೆಯಬಹುದಾಗಿದೆ
- ❖ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ವಿಶೇಷ ಯೋಜನೆಯಡಿಯಲ್ಲಿ ಮಾನಸಿಕ ದೌರ್ಬಲ್ಯದಿಂದ ನರಳುತ್ತಿರುವ ರೋಗಿಗಳೂ ಸಹ ಉಚಿತ ಕಾನೂನು ಸೇವೆಯನ್ನು ರಾಜ್ಯ/ಜಿಲ್ಲಾ ಪ್ರಾಧಿಕಾರದ ಮೂಲಕ ಪಡೆಯಬಹುದಾಗಿದೆ
- ❖ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಕಾನೂನು ಸೇವೆಗಳ ಸಂಸ್ಥೆಗಳಿಗೆ ಸೂಚಿಸಿರುವ ಮಾರ್ಗದರ್ಶನದಂತೆ ರಾಜ್ಯದ ಎಲ್ಲಾ ಕೇಂದ್ರದಲ್ಲಿರುವ ಬಾಲ ನ್ಯಾಯ ಮಂಡಳಿಯ ರಕ್ಷೆಯಲ್ಲಿರುವ ಮಕ್ಕಳು ಉಚಿತ ಕಾನೂನು ಸೇವೆಯನ್ನು ರಾಜ್ಯ/ಜಿಲ್ಲಾ ಪ್ರಾಧಿಕಾರದಿಂದ ಪಡೆಯಬಹುದಾಗಿರುತ್ತದೆ.

**ಉಚಿತ ಕಾನೂನು ಸಲಹಾ ಕೇಂದ್ರಗಳು:–**

ಸಾರ್ವಜನಿಕರಿಗಾಗಿ ಜಿಲ್ಲಾ ಪ್ರಾಧಿಕಾರವು ಈ ಕೆಳಕಂಡ ಸ್ಥಳಗಳಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಸೇವೆಯನ್ನು ಪ್ರಾರಂಭಿಸಲಾಗಿದ್ದು, ಈ ಕೇಂದ್ರಗಳ ಮೂಲಕ ಸಾರ್ವಜನಿಕರು ದಿನನಿತ್ಯದ ಕಾನೂನು ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ.

:: **ಉಚಿತ ಕಾನೂನು ಸಲಹಾ ಕೇಂದ್ರಗಳ ವಿವರ::**

- ಜಿಲ್ಲಾ ನ್ಯಾಯಾಲಯದ ಆವರಣ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಎಡಿಆರ್ ಕಟ್ಟಡ, ಸಿವಿಲ್ ನ್ಯಾಯಾಲಯಗಳ ಆವರಣ, ಧಾರವಾಡ.
- ಬಾಲ ನ್ಯಾಯ ಮಂಡಳಿ, ಧಾರವಾಡ.
- ಕೇಂದ್ರ ಕಾರಾಗೃಹ, ಧಾರವಾಡ.
- ಸಿ.ಡಿ.ಪಿ.ಓ ಕಛೇರಿ, ಧಾರವಾಡ.
- ತಹಶೀಲ್ದಾರ ಕಛೇರಿ, ಧಾರವಾಡ.
- ಎಆರ್‌ಟಿ ಸೆಂಟರ್ ಜಿಲ್ಲಾ ಆಸ್ಪತ್ರೆ, ಧಾರವಾಡ.
- ಕಾನೂನು ನೆರವು ಕೇಂದ್ರ ಡಿಮಾನ್ಸ್, ಧಾರವಾಡ.

**ಜನತಾ ನ್ಯಾಯಾಲಯ (ಲೋಕ ಅದಾಲತ್)ಗಳು:–**

- ಪ್ರಕರಣವೊಂದರಲ್ಲಿ ಉಭಯ ಪಕ್ಷಗಳವರಲ್ಲಿ ರಾಜೀ ಸಂದಾನ ಏರ್ಪಡಿಸುವ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಉದ್ದೇಶದಿಂದ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಾಲಯದ ಅಥವಾ ತಾಲ್ಲೂಕು ಕಾನೂನು ಸೇವೆಗಳ ಸಮಿತಿ ರಚಿಸುವ ನ್ಯಾಯಾಲಯವೇ ಜನತಾ ನ್ಯಾಯಾಲಯ: (ಲೋಕ ಅದಾಲತ್).

**ಜನತಾ ನ್ಯಾಯಾಲಯಗಳಲ್ಲಿ ಎಂತಹ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗುತ್ತದೆ** ?

- ಮೋಟಾರು ವಾಹನ ಅಪಘಾತ ಸಂಬಂಧ ಪರಿಹಾರ ಪ್ರಕಣಗಳು.
- ಭೂ–ಸ್ವಾಧಿನ ಸಂಬಂಧ ಪ್ರಕರಣಗಳು, ನಗರಾಭಿವೃದ್ಧಿ ಪ್ರಾಧಿಕಾರ, ಮಹಾನಗರ ಪಾಲಿಕ, ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು.
- ಬ್ಯಾಂಕುಗಳಿಗೆ ಸಂಬಂಧಿಸಿದ ಪ್ರಕರಣಗಳು.
- ವೈವಾಹಿಕ ಅಥವಾ ಜೀವನಾಂಶ ಪ್ರಕರಣಗಳು; ಕಾನೂನಿನ್ವಯ ರಾಜೀ ಆಹಬಹುದಾದ ಕ್ರಿಮಿನಲ್ ಪ್ರಕರಣಗಳು;
- ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳು:
- ಗ್ರಾಹಕರು ವಿವಾದಗಳಿಗೆ ಸಂಬಂಧಿಸಿದಂತೆ ಪ್ರಕರಣಗಳು;
- ರಾಜೀ ಆಗಬಹುದಾದ ಎಲ್ಲಾ ವಿವಿಧ ಪ್ರಕರಣಗಳನ್ನು ಜನತಾ ನ್ಯಾಯಾಲಯಗಳು ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು.

**ಖಾಯಂ ಜನತಾ ನ್ಯಾಯಾಲಯಗಳು (Permanent Lok Adalat)**

- ಸಾಮಾನ್ಯ ಜನರಿಗೆ ತ್ವರಿತವಾಗಿ ಹಾಗೂ ಉಚಿತವಾಗಿ (ಶುಲ್ಕ ರಹಿತ) ನ್ಯಾಯ ಒದಗಿಸುವ ಸಲುವಾಗಿ ಖಾಯಂ ಜನತಾ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆ.
- ಪ್ರಕರಣಗಳನ್ನು ದಾಖಲು ಮಾಡಲು ಅರ್ಜಿದಾರರಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ.
- ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸುವುದಕ್ಕಿಂತ ಮೊದಲು ಖಾಯಂ ಜನತಾ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿ ರಾಜಿ ಸಂಧಾನದ ಮೂಲಕ ವಿವಾದಗಳನ್ನು ಬೇಗನೆ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.
- ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದ ವಿವಾದಗಳನ್ನು ರಾಜೀ ಸಂಧಾನದ ಮುಖಾಂತರ ಇತ್ಯರ್ಥಗೊಳಿಸಿಕೊಳ್ಳಬಹುದು.
- ಖಾಯಂ ಜನತಾ ನ್ಯಾಯಾಲಯಗಳಿಗೆ ಬರುವ ಪ್ರಕರಣಗಳಲ್ಲಿಯ ವಿವಾದದ ಅಥವಾ ವ್ಯಾಜ್ಯದ ಮೌಲ್ಯ ಹಾಗೂ ಹಣಕಾಸು ಸಂಸ್ಥೆಗಳ ವ್ಯವಹಾರಕ್ಕೆ ಸಂಬಂಧಪಟ್ಟಂತೆ ಮೌಲ್ಯ ಒಂದು ಕೋಟಿ ಮೀರಿರಬಾರದು.

- ❖ ಖಾಯಂ ಜನತಾ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸುವಾಗ ಅದೇ ವಿವಾದಕ್ಕೆ ಸಂಬಂಧಿಸಿದಂತೆ ಬೇರೆ ನ್ಯಾಯಾಲಯದಲ್ಲಿ ದಾವೆ ಅಥವಾ ಅರ್ಜಿಯನ್ನು ಸಲ್ಲಿಸಿರಬಾರದು.
- ❖ ಖಾಯಂ ಜನತಾ ನ್ಯಾಯಾಲಯದಲ್ಲಿ ಸಲ್ಲಿಸಬೇಕಾದ ಅರ್ಜಿ ಯಾವುದೇ ಕ್ರಿಮಿನಲ್ ಪ್ರಕರಣ ಅಥವಾ ಅಪರಾಧಕ್ಕೆ ಸಂಬಂಧಿಸಿರಬಾರದು.
- ❖ ಖಾಯಂ ಜನತಾ ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜಿ ಮಾಡಿಕೊಳ್ಳಲು ಮಾರ್ಗದರ್ಶನ ನೀಡಲಾಗುವುದು. ರಾಜಿ ಸಂಧಾನ ವಿಫಲವಾದರೆ ಆ ಪ್ರಕರಣದ ವಿಚಾರಣೆ ನಡೆಸಿ ಅದನ್ನು ಇತ್ಯರ್ಥಗೊಳಿಸಲಾಗುವುದು.

**ಸಾರ್ವಜನಿಕ ಉಪಯುಕ್ತ ಸೇವೆಗಳೆಂದರೆ:**

1. ಪ್ರಯಾಣಿಕರು ಅಥವಾ ಸರಕನ್ನು ಸಾಗಿಸುವ ಸಾಗಣೆ ಸೇವೆ (ರೈಲ್ವೆ ಸಾಗಣೆ ಬಿಟ್ಟು).
2. ಅಂಚೆ, ತಂತಿ, ದೂರವಾಣಿ ಸೇವೆ,
3. ವಿದ್ಯುತ್ ಅಥವಾ ಕರೆಂಟ್ ಅಥವಾ ಬೆಳಕು, ನೀರು ಸರಬರಾಜು ಮಾಡುವ ಯಾವುದೇ ಸಂಸ್ಥೆ,
4. ಸಾರ್ವಜನಿಕ ನೈರ್ಮಲ್ಯ ವ್ಯವಸ್ಥೆ,
5. ವಿಮಾ ಸೇವೆ,
6. ಆಸ್ಪತ್ರೆ ಅಥವಾ ಔಷಧಾಲಯದಲ್ಲಿಯ ಸೇವೆ,
7. ಹಣಕಾಸು ಸಂಸ್ಥೆಗಳಿಗೆ ಹಾಗೂ ಬ್ಯಾಂಕ್ ಸೇವೆಗಳಿಗೆ ಸಂಬಂಧಪಟ್ಟ ಪ್ರಕರಣಗಳು
8. ಶಿಕ್ಷಣ ಅಥವಾ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಪಟ್ಟಂತೆ ಅಥವಾ
9. ಹೌಸಿಂಗ್ ಮತ್ತು ರಿಯಲ್ ಎಸ್ಟೇಟ್‌ಗಳಿಗೆ ಸಂಬಂಧಪಟ್ಟ ಪ್ರಕರಣಗಳು

***ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಬೆಳಗಾವಿ ಹಾಗೂ ಗುಲ್ಬರ್ಗಾದಲ್ಲಿ ಖಾಯಂ ಜನತಾ ನ್ಯಾಯಾಲಯಗಳು ಕಾರ್ಯನಿರ್ವಹಿಸುತ್ತಿವೆ.***

**ಧಾರವಾಡ ಖಾಯಂ ಜನತಾ ನ್ಯಾಯಾಲಯದ ವ್ಯಾಪ್ತಿಯಲ್ಲಿ ಈ ಕೆಳಗೆ ನಮೂದಿಸಿದ ಜಿಲ್ಲೆಗಳ ಪ್ರಕರಣಗಳು ಒಳಪಡುತ್ತವೆ:–**

ಧಾರವಾಡ, ಬಳ್ಳಾರಿ, ದಾವಣಗೇರಿ, ಹಾವೇರಿ, ಗದಗ, ಕೊಪ್ಪಳ & ಉತ್ತರ ಕನ್ನಡ ಜಿಲ್ಲೆಗಳು ಆದ್ದರಿಂದ ಸಾರ್ವಜನಿಕರು ತಮಗೆ ಸಾರ್ವಜನಿಕ ಉಪಯುಕ್ತ ಸೇವೆಗಳ ಲಬ್ದತೆಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣಗಳು ಇದ್ದರೂ ಅವುಗಳನ್ನು ನ್ಯಾಯಾಲಯಕ್ಕೆ ಹೋಗುವ ಮೊದಲು ರಾಜಿ ಸಂಧಾನಕ್ಕಾಗಿ ಖಾಯಂ ಜನತಾ ನ್ಯಾಯಾಲಯಗಳಲ್ಲಿ ದಾಖಲಿಸಬಹುದಾಗಿದೆ. ಒಂದು ವೇಳೆ ರಾಜಿ ಸಂಧಾನ ವಿಫಲವಾದರೆ ಖಾಯಂ ಜನತಾ ನ್ಯಾಯಾಲಯದಲ್ಲಿ ಪ್ರಕರಣದ ಸಾಕ್ಷ ಮತ್ತು ವಾದ ವಿವಾದಗಳನ್ನು ಆಲಿಸಿ ಕಾನೂನಿನ ಪ್ರಕಾರ ಇತ್ಯರ್ಥಗೊಳಿಸಲಾಗುತ್ತದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಖಾಯಂ ಜನತಾ ನ್ಯಾಯಾಲಯ ಅಥವಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸಂಪರ್ಕಿಸಬಹುದು.

**–:ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:–**

*ಖಾಯಂ ಜನತಾ ನ್ಯಾಯಾಲಯ,*

*ಎ.ಡಿ.ಆರ್ ಕಟ್ಟಡ ಸಿವಿಲ್ ನ್ಯಾಯಾಲಯಗಳ ಆವರಣ, ಕೋರ್ಟ ಸರ್ಕಲ್ ಹತ್ತಿರ, ಧಾರವಾಡ*

*ದೂರವಾಣಿ ಸಂಖ್ಯೆ:0836–2440082 ಟೋಲ್ ಫ್ರೀ ನಂ.1800–425–90900*

**ಮಧ್ಯಸ್ಥಿಕೆ ಕೇಂದ್ರ:–**

- ❖ ಮಧ್ಯಸ್ಥಿಕೆಯು ವಿವಾದ ಹೊಂದಿರುವ ಪಕ್ಷಕಾರರು ವಿಚಾರಣೆ ಹೋಗದೆ ತಮ್ಮ ವಿವಾದವನ್ನು ಸೃಜನಾತ್ಮಕವಾಗಿ ಇತ್ಯರ್ಥಪಡಿಸಿಕೊಳ್ಳಲು ಸಹಾಯ ಮಾಡುವ ಒಂದು ಪ್ರಕ್ರಿಯೆಯಾಗಿದೆ ವಿವಾದ ಇತ್ಯರ್ಥಕ್ಕೆ ಮಧ್ಯಸ್ಥಿಕೆಯ ಎಲ್ಲಾ ಪಕ್ಷಕಾರರು ಹಾಗೂ ಅವರ ವಕೀಲರ ಸಕ್ರೀಯವಾಗಿ ಪಾಲ್ಗೊಳ್ಳುವಂತಹ ಒಂದು ವಿಶಿಷ್ಟ ಅವಕಾಶವನ್ನು ಇದು ಕಲ್ಪಿಸುತ್ತದೆ. ಮಧ್ಯಸ್ಥಿಕೆಯಲ್ಲಿ ನಿರ್ಧಾರ ಕೈಗೊಳ್ಳುವ ಅಧಿಕಾರವು ಯಾವಾಗಲೂ ಪಕ್ಷ ಕಾರರದ್ದೆ ಆಗಿರುತ್ತದೆ. ಮಧ್ಯಸ್ಥಗಾರರು ವಿವಾದವೆತ್ತಿರುವ ಪಕ್ಷಕಾರರನ್ನು ವಿವಾದಕ್ಕೊಳಗಾಗಿರುವ ವಿಷಯವನ್ನು ಅರ್ಥ ಮಾಡಿಕೊಂಡು ಇತ್ಯರ್ಥಕ್ಕೆ ಬರಲು ಇರುವ ಅಡ್ಡಿ ಆತಂಕಗಳನ್ನು ನಿವಾರಿಸಲು ಪ್ರಯತ್ನ ಮಾಡುತ್ತೇವೆ.

- ❖ ಮಧ್ಯಸ್ಥಿಕೆಯು ಸ್ವಪ್ರೇರಿತವಾದದ್ದಾಗಿರುತ್ತದೆ. ಮಧ್ಯಸ್ಥಿಕೆಯು ಯಾವಾಗಲೂ ಪಾರದರ್ಶಕವಾಗಿರುತ್ತದೆ. ಮಧ್ಯಸ್ಥಿಕೆಯಲ್ಲಿ ಹಣ ಮತ್ತು ಸಮಯ ವ್ಯರ್ಥವಾಗುವುದಿಲ್ಲ. ಮಧ್ಯಸ್ಥಿಕೆಯಲ್ಲಿ ನಿಯಮ ಹಾಗೂ ಸಾಕ್ಷ್ಯಕ್ಕೆ ಬದಲಾಗಿ ಪಕ್ಷಕಾರರ ಹಿತಾಸಕ್ತಿಗಳ ಬಗೆಗೆ ಗಮನ ಹರಿಸಲಾಗುವುದು. ಮಧ್ಯಸ್ಥಿಕೆಯು ಪಕ್ಷಕಾರರು ತಾವೇ ವಿವಾದವನ್ನು ಇತ್ಯರ್ಥಗೊಳಿಸಿಕೊಳ್ಳಲು ಶಕ್ತರಾಗುವಂತೆ ಮಾಡುತ್ತದೆ. ಪ್ರಕರಣದ ಇತ್ಯರ್ಥ ಸಾಧ್ಯವಾಗದಿದ್ದಲ್ಲಿ ನ್ಯಾಯ ನಿರ್ಣಯಕ್ಕಾಗಿ ಅದನ್ನು ಮಧ್ಯಸ್ಥಿಕೆಗಾಗಿ ಕಳುಹಿಸಿದ ನ್ಯಾಯಾಲಯಕ್ಕೆ ವಾಪಸ್ಸು ಕಳುಹಿಸಲಾಗುವುದು. ಪ್ರತಿ ಜಿಲ್ಲೆಯಲ್ಲಿ ಮಧ್ಯಸ್ಥಿಕೆ ಕೇಂದ್ರವನ್ನು ಸ್ಥಾಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯಾಲಯವನ್ನು ಸಂಪರ್ಕಿಸಬಹುದು.
- ❖ ವಾಣಿಜ್ಯ ವಿವಾದಗಳನ್ನು ಮಧ್ಯಸ್ಥಿಕೆದಾರರ ಮೂಲಕ ವ್ಯಾಜ್ಯಪೂರ್ವವಾಗಿ ಇತ್ಯರ್ಥಪಡಿಸಲಾಗುಗುವುದು. (Commercial Courts (Pre-Institution Mediation and Settlement) Rule, 2008).

**ರಾಜೀ ಸಂಧಾನ / ವ್ಯಾಜ್ಯ ಪೂರ್ವ ಪ್ರಕರಣ :–**

ಸಾರ್ವಜನಿಕರು ದಿನ ನಿತ್ಯದ ಕಾನೂನು ಹಾಗೂ ಇತರೆ ಸಮಸ್ಯೆಗಳ ಬಗ್ಗೆ ಸಂಬಂಧಪಟ್ಟ ಕಾರ್ಯಾಲಯಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ಸಮಸ್ಯೆಗಳನ್ನು ಪರಿಹರಿಸುವ ವ್ಯವಸ್ಥೆ ಮಾಡಲಾಗುವುದು.

**ಅರೇ ಕಾಲಿಕ ಸ್ವಯಂ ಸೇವಕರು (Para Legal Volunteers-PLV) :–**

ಕಾನೂನು ಸಹಾಯಕರಾಗಿ ತರಬೇತಿ ಪಡೆದವರು ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಅರ್ಹ ನಾಗರೀಕರ ನಡುವೆ ಪರಿಣಾಮಕಾರಿ ಸಮನ್ವಯಕಾರರಾಗಿ ಕಾರ್ಯನಿರ್ವಹಿಸುತ್ತಾರೆ.

ಸ್ವಪ್ರೇರಿತ ಕಾನೂನು ಸಹಾಯಕರು ತಮ್ಮ ಸುತ್ತಮುತ್ತಲಿನ ಪ್ರದೇಶದ ಶೋಷಿತ ಹಾಗೂ ದೌರ್ಜನ್ಯಕ್ಕೊಳಗಾದ ಜನರ ಸೇವೆ ಮಾಡಲು ಅರ್ಪಣಾ ಮನೋಭಾವ ಹೊಂದಿರುತ್ತಾರೆ. ಇವರು ಸರ್ಕಾರದ ವಿವಿಧ ಯೋಜನೆಗಳು, ಆದೇಶಗಳು, ಶಾಸನಗಳು ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ, ಜನತಾ ನ್ಯಾಯಾಲಯಗಳು, ಪರ್ಯಾಯ ವಿವಾದ ಪರಿಹಾರ ವ್ಯವಸ್ಥೆ, ಉಚಿತ ಕಾನೂನು ಸಹಾಯ ಮತ್ತು ಸೇವೆಗಳ ಬಗೆಗೆ ಅರಿವನ್ನುಂಟು ಮಾಡುವ ಸೇವೆಯನ್ನು ಸಲ್ಲಿಸುವುದಲ್ಲದೇ ನಾಗರೀಕರ ಹಕ್ಕುಗಳು ಹೊಣೆಗಳ ಬಗೆಗೆ ಶಿಕ್ಷಣ ನೀಡುವುದು, ಸಮಸ್ಯೆಗಳಿಗೆ ಪರಿಹಾರ/ಸಲಹೆ ಕೋರಿ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸುವ ಬಗೆಗೆ ಜನರಲ್ಲಿ ಅರಿವು ಮೂಡಿಸುವುದು, ನಮ್ಮ ಕಾರ್ಯಕ್ಷೇತ್ರದಲ್ಲಿ ನಡೆಯುವ ಕಾನೂನು ಉಲ್ಲಂಘನೆಯ ಹಾಗೂ ಅನ್ಯಾಯದ ಕಾರ್ಯಗಳ ಬಗೆಗೆ ಪರಿಣಾಮಕಾರಿ ಪರಿಹಾರ ಜರುಗಿಸಲು ಸಾಧ್ಯವಾಗುವಂತೆ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ಕಾನೂನು ಸೇವೆಗಳ ಸಮಿತಿಗೆ ಶೀಘ್ರವಾಗಿ ವರದಿ ಮಾಡುವುದು, ಕಾನೂನು ಅರಿವು ಶಿಬಿರಗಳನ್ನು ಬೇರೆಯವರ ಸಹಯೋಗದೊಂದಿಗೆ ವ್ಯವಸ್ಥೆಗೊಳಿಸುವುದು, ಕಾನೂನು ಸೇವೆಗಳ ಪ್ರಾಧಿಕಾರ/ಕಾನೂನು ಸೇವೆಗಳ ಸಮಿತಿಗಳು ಒದಗಿಸುವ ಸೇವೆಗಳ ಬಗೆಗೆ ಅರಿವನ್ನುಂಟು ಮಾಡುವುದು, ಮಧ್ಯಸ್ಥಿಕೆ, ರಾಜಿ ಸಂಧಾನ ಮತ್ತು ಜನತಾ ನ್ಯಾಯಾಲಯಗಳ ಮೂಲಕ ವಿವಾದಗಳನ್ನು ಪರಿಹರಿಸಿಕೊಳ್ಳುವುದರಲ್ಲಿ ಇರುವ ಪ್ರಯೋಜನದ ಬಗೆಗೆ ನಾಗರೀಕರಿಗೆ ತಿಳುವಳಿಕೆ ನೀಡುವುದು, ಖಾಯಂ ಜನತಾ ನ್ಯಾಯಾಲಯಗಳಲ್ಲಿ ಸಾರ್ವಜನಿಕ ಉಪಮಯುಕ್ತ ಸೇವೆಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡುವುದು, ಇವೇ ಮುಂತಾದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಸ್ವಪ್ರೇರಿತ ಕಾನೂನು ಸಹಾಯಕರು ಸಮಾಜದಲ್ಲಿ ಎಲ್ಲರಿಗೂ ನ್ಯಾಯಕ್ಕೆ ಪ್ರವೇಶಾವಕಾಶ ಸಿಗುವಲ್ಲಿ ಅರ್ಪಣಾ ಮನೋಭಾಗದಿಂದ ಸದಾ ಶ್ರಮಸುತ್ತಿರುತ್ತಾರೆ.

**ಅರೇ ಕಾಲಿಕ ಸ್ವಯಂ ಸೇವಕರು (Para Legal Volunteers-PLV) :–**

ಜನರಲ್ಲಿ ಕಾನೂನು ಅರಿವು ಮೂಡಿಸುವ ನಿಟ್ಟಿನಲ್ಲಿ ರಾಜ್ಯ ಪ್ರಾಧಿಕಾರದಿಂದ ಪ್ರಕಟಿಸಲಾದ ಅನೇಕ ಪುಸ್ತಕಗಳು, ಕಿರು ಹೊತ್ತಿಗೆಗಳು ಹಾಗೂ ಕರಪತ್ರಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ಇಲ್ಲವೆ ಅತ್ಯಂತ ಕಡಿಮೆ ಬೆಲೆಗೆ ವಿತರಿಸುವುದು. ಎಲ್ಲಾ ವರ್ಗದ ಜನರಿಗೆ ಕಾನೂನು ಕಾರ್ಯಾಗಾರ, ಸರ್ಕಾರೇತರ ಸಂಸ್ಥೆಗಳು, ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಇತರೆ ಸ್ವಯಂ ಸೇವಾ ಸಂಸ್ಥೆಗಳ

ಸಹಯೋಗದೊಂದಿಗೆ ಕಾನೂನು ಅರಿವು-ನೆರವು ಕಾರ್ಯಕ್ರಮಗಳನ್ನು ಏರ್ಪಡಿಸುವುದರ ಜೊತೆಗೆ ಪ್ರಾಧಿಕಾರದಿಂದ ಕಾನೂನು ಗೀತೆಗಳು, ಧ್ವನಿ ಸುರಳಿಗಳು, ನಾಟಕಗಳು ಹಾಗೂ ಟೆಲಿ ನಾಟಕಗಳು ಮೂಲಕ ಜನರಲ್ಲಿ ಕಾನೂನಿನ ಬಗೆಗೆ ಅರಿವನ್ನುಂಟು ಮಾಡಲು ನಿರಂತರವಾಗಿ ಶ್ರಮಿಸಲಾಗುತ್ತದೆ.

**: ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿಳಾಸ:**


ಎಡಿಆರ್ ಕಟ್ಟಡ ಸಿವಿಲ್ ನ್ಯಾಯಾಲಯಗಳ ಆವರಣ, ಧಾರವಾಡ-580001

ದೂರವಾಣಿ ಸಂಖ್ಯೆ: 0836-2740128